**All India Radio: Bangalore**
**Regional Bulletin In Kannada**
**22.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.04.2025 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರು ಹಲ್ಲೆ ಪ್ರಕರಣ ; ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ; ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ನಿವೃತ್ತ ಪೊಲೀಸ್ ಅಧಿಕಾರಿ ಹತ್ಯೆ ಪ್ರಕರಣದ ತನಿಖೆ ಸಿಸಿಬಿಗೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್
3. ರಾಜಸ್ಥಾನ ಮಧ್ಯಪ್ರದೇಶದಲ್ಲೂ ನಂದಿನಿ ಉತ್ಪನ್ನಗಳ ಮಾರಾಟಕ್ಕೆ ಕರ್ನಾಟಕ ಹಾಲು ಒಕ್ಕೂಟ ನಿರ್ಧಾರ
4. ಐತಿಹಾಸಿಕ ಒಂದು ಲಕ್ಷ ರೂಪಾಯಿ ಗಡಿ ದಾಟಿದ ಹತ್ತು ಗ್ರಾಂ ಚಿನ್ನದ ಬೆಲೆ
5. ವಿಶ್ವ ಭೂಮಿ ದಿನ ; ನಮ್ಮ ಶಕ್ತಿ ನಮ್ಮ ಗ್ರಹ ಈ ವರ್ಷದ ಧ್ಯೇಯ ವಾಕ್ಯ

<><><><>

ದೇಶದ ಮೂಲೆ ಮೂಲೆಗಳಿಂದ ಬಂದು ಬೆಂಗಳೂರಿನಲ್ಲಿ ನೆಲೆಸಿರುವ ಪ್ರತಿಯೊಬ್ಬರನ್ನು ಗೌರವದಿಂದ ಕಾಣುತ್ತ ಅವರನ್ನು ಕನ್ನಡಿಗರೇ ಎಂದು ಪ್ರೀತಿಸುವ ಸಂಸ್ಕೃತಿ ಕನ್ನಡ ಮಣ್ಣಿನದ್ದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಕನ್ನಡಿಗ ವಿಕಾಸ್ ಕುಮಾರ್ ಮೇಲೆ ಹಲ್ಲೆ ನಡೆಸಿರುವ ವಾಯುಪಡೆ ಅಧಿಕಾರಿ ಪ್ರಕರಣಕ್ಕೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. ರಾಜ್ಯದ ಘನತೆಗೆ ಮಸಿ ಬಳಿಯುವ ಕೆಲಸ ಮಾಡಿದ್ದು, ವಿಷಾದನೀಯ ಎಂದು ಹೇಳಿದ್ದಾರೆ. ಪ್ರಕರಣವನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಅನ್ಯಾಯಕ್ಕೊಳಗಾದ ವ್ಯಕ್ತಿಗೆ ನ್ಯಾಯ ಕೊಡಿಸಲು ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

<><><><>

ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಹತ್ಯೆ ಪ್ರಕರಣವನ್ನು ಸಿಸಿಬಿಗೆ ನೀಡಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೃತ ಓಂ ಪ್ರಕಾಶ್ ಅವರ ಪತ್ನಿ ಪಲ್ಲವಿ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದು, ತಾನೇ ಹತ್ಯೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರೆ ಎಂದು ಹೇಳಿದ್ದಾರೆ. ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ರಸ್ತೆಯಲ್ಲಿ ಯುವಕನ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ವಾಯುಪಡೆ ಅಧಿಕಾರಿಯ ವಿರುದ್ಧ ಬೆಂಗಳೂರಿನ ಬೈಯಪ್ಪನಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><><><>

ಕರ್ನಾಟಕದ ಜನಪ್ರಿಯ ಹಾಲಿನ ಬ್ರಾಂಡ್ ನಂದಿನಿ, ಈಗ ದೇಶದ ಎರಡನೇ ಅತಿದೊಡ್ಡ ಹಾಲು ಉತ್ಪಾದಿಸುವ ರಾಜ್ಯವಾದ ರಾಜಸ್ಥಾನಕ್ಕೆ ಪ್ರವೇಶಿಸಲು ಸಜ್ಜಾಗಿದೆ. ರಾಜಸ್ಥಾನದಲ್ಲಿ ಸಹ-ಪ್ಯಾಕೇಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಕೆಎಂಎಫ್ ನಿರ್ಧರಿಸಿದೆ ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ ಶಿವಸ್ವಾಮಿ ತಿಳಿಸಿದ್ದಾರೆ. ಉತ್ತರ ಭಾರತದ ಮಾರುಕಟ್ಟೆಗೆ ಪ್ರವೇಶಿಸಲು, ಮಧ್ಯಪ್ರದೇಶವನ್ನು ಅದರ ವಿಶಾಲ ರಾಷ್ಟ್ರೀಯ ವಿಸ್ತರಣಾ ಕಾರ್ಯತಂತ್ರದ ಭಾಗವಾಗಿ ಮಾಡಿಕೊಳ್ಳಲು ಚಿಂತನೆ ನಡೆಸಿದೆ ಎಂದು ಹೇಳಿದ್ದಾರೆ. ಈ ಕ್ರಮವು ಕೋಲ್ಡ್ ಚೈನ್‌ನ ಮೇಲಿನ ಹೊರೆ ಕಡಿಮೆ ಮಾಡುವ ನಿರೀಕ್ಷೆಯಿದೆ. ಇದರಿಂದ ಪೌಷ್ಟಿಕಾಂಶದ ಮೌಲ್ಯ ಸಂರಕ್ಷಿಸಿ ಹಾಳಾಗುವ ಅಪಾಯ ಕಡಿಮೆಯಾಗಿದೆ. ಪ್ರೋಟೀನ್-ಭರಿತ ಆಹಾರಗಳು ಜನಪ್ರಿಯತೆ ಗಳಿಸುತ್ತಿರುವುದರಿಂದ,

ಕೆಎಂಎಫ್ ಮೇ ತಿಂಗಳಲ್ಲಿ ಹೊಸ ಶ್ರೇಣಿಯ ಹೈ-ಪ್ರೋಟೀನ್ ಡೈರಿ ಉತ್ಪನ್ನಗಳನ್ನು ಬಿಡುಗಡೆ ಮಾಡಲು ಸಜ್ಜಾಗಿದೆ. ಮುಂಬರುವ ಸಾಲಿನಲ್ಲಿ ಟೆಟ್ರಾ ಪ್ಯಾಕ್‌ಗಳಲ್ಲಿ ಪ್ರೋಟೀನ್-ಭರಿತ ಫ್ಲೇವರ್ಡ್ ಹಾಲು, ಜೊತೆಗೆ ಸಾದಾ ಮತ್ತು ಫ್ಲೇವರ್ಡ್ ಗ್ರೀಕ್ ಮೊಸರಿನಂತಹ ಹುದುಗಿಸಿದ ಉತ್ಪನ್ನ ಇರುತ್ತದೆ ಎಂದು ಶಿವಸ್ವಾಮಿ ಮಾಹಿತಿ ನೀಡಿದ್ದಾರೆ.

<><><><>

ಇಂದು ಹಳದಿ ಲೋಹ ಚಿನ್ನದ ಬೆಲೆ ಐತಿಹಾಸಿಕ ಮೈಲಿಗಲ್ಲು ಸೃಷ್ಟಿಸಿದೆ. ೨೪ ಕ್ಯಾರೆಟ್ ಚಿನ್ನದ ಬೆಲೆ ಇದೇ ಮೊದಲ ಬಾರಿಗೆ ೧ ಲಕ್ಷ ರೂಪಾಯಿಯ ಗಡಿ ದಾಟಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ೨೪ ಕ್ಯಾರೆಟ್ ಚಿನ್ನದ ಬೆಲೆ ೨೪ ಗಂಟೆಗಳಲ್ಲಿ ಮೂರು ಸಾವಿರದ ೩೦೦ ರೂಪಾಯಿಗಳ ಏರಿಕೆ ಕಂಡಿದೆ ಎಂದು ಭಾರತ ಆಭರಣ ವ್ಯಾಪಾರಿಗಳ ಒಕ್ಕೂಟ ತಿಳಿಸಿದೆ. ನಿನ್ನೆ ೧೦ ಗ್ರಾಂ ಚಿನ್ನ ಬೆಲೆ ೯೬ ಸಾವಿರದ ೬೭೦ ರೂಪಾಯಿಯಾಗಿತ್ತು. ಚಿನ್ನದ ಬೆಲೆಯ ಹಠಾತ್ ಏರಿಕೆಗೆ ಸುರಕ್ಷಿತ ಹೂಡಿಕೆಯಾಗಿ ಚಿನ್ನದ ಜಾಗತಿಕ ಬೇಡಿಕೆ ಹೆಚ್ಚಾಗಿರುವುದು ಕಾರಣ ಎಂದು ಮಾರುಕಟ್ಟೆ ತಜ್ಞರು ವಿಶ್ಲೇಷಿಸಿದ್ದಾರೆ.

<><><><>

ಕರ್ನಾಟಕ ರಾಜ್ಯ ಸರ್ಕಾರದ ಆನ್ ಲೈನ್ ತರಬೇತಿ ಪೋರ್ಟಲ್ ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ಚಾಲನೆ ನೀಡಿದ್ದಾರೆ. ರಾಜ್ಯ ಸರ್ಕಾರದ  ತರಬೇತಿ ನೀತಿ ೧೯೯೬ ರಂತೆ, ಆಡಳಿತ ತರಬೇತಿ ಸಂಸ್ಥೆ, ಮೈಸೂರು, ಜಿಲ್ಲಾ ತರಬೇತಿ ಕೇಂದ್ರ ಮತ್ತು ಸಚಿವಾಲಯ ತರಬೇತಿ ಸಂಸ್ಥೆಯ ಮೂಲಕ ಸಿಬ್ಬಂದಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡುವ ಮಹತ್ವದ ಹೆಜ್ಜೆ ಕೈಗೊಳ್ಳಲಾಗಿದೆ.  ಇನ್ನು ಮುಂದೆ ತರಬೇತಿ ಕೇವಲ ಭೌತಿಕವಷ್ಟೇ ಅಲ್ಲದೆ, I-GoT ವೇದಿಕೆಯ ಸಹಭಾಗಿತ್ವದಲ್ಲಿ atimysore.karnataka.gov.in ಪೋರ್ಟಲ್ ಮೂಲಕ ಆನ್ ಲೈನ್‌ನಲ್ಲಿಯೂ ಇದನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಾಗಿದೆ.  ಪ್ರಸ್ತುತ ೪ ಲಕ್ಷ ೫೫ ಸಾವಿರದ ೭೪೬ ಸರ್ಕಾರಿ ನೌಕರರು ಈ ವೇದಿಕೆಯಲ್ಲಿ ನೋಂದಣಿ ಮಾಡಿದ್ದಾರೆ. ಸರ್ಕಾರಿ ನೌಕರರು ಅವರ ಹೆಚ್.ಆರ್.ಎಂ.ಎಸ್. ಮೊಬೈಲ್ ಸಂಖ್ಯೆಯ ಮೂಲಕ I-GoT ವೇದಿಕೆಯಲ್ಲಿ ಲಾಗಿನ್ ಆಗಿ ತರಬೇತಿ ಪಡೆಯಬಹುದಾಗಿದೆ. ತಮಗೆ ಅಗತ್ಯವಾದ ತರಬೇತಿಗಳನ್ನು ಪಡೆಯುವುದರ ಮೂಲಕ ಸಮರ್ಥ ಹಾಗೂ ಉತ್ತಮ ಆಡಳಿತ ನೀಡಬಹುದಾಗಿದೆ.

<><><><>

ಇಂದು ವಿಶ್ವ ಭೂಮಿ ದಿನ. ಪರಿಸರ ಸಂರಕ್ಷಣೆ ಹಿನ್ನೆಲೆಯಲ್ಲಿ ಈ ದಿನವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತಿದೆ. ೧೯೬೯ ರಲ್ಲಿ ಯುನೆಸ್ಕೋ ಶೃಂಗಸಭೆಯಲ್ಲಿ ವಿಶ್ವ ಭೂಮಿ ದಿನವನ್ನಾಗಿ ಆಚರಿಸಬೇಕೆಂಬ ಸಲಹೆ ಬಂದ ಬಳಿಕ ೧೯೭೦ ರಲ್ಲಿ ಮೊದಲ ಭೂಮಿ ದಿನ ಆಚರಿಸಲಾಯಿತು. ಈ ವರ್ಷದ ಧ್ಯೇಯ ವಾಕ್ಯ "ನಮ್ಮ ಶಕ್ತಿ, ನಮ್ಮ ಗ್ರಹ" ಎಂಬುದಾಗಿದೆ. ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಮತ್ತು ನಮ್ಮ ಭೂಗ್ರಹವನ್ನು ಸಂರಕ್ಷಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಹುರಿದಿಂಬಿಸುವುದು ಈ ದಿನದ ಉದ್ದೇಶವಾಗಿದೆ. ಜಗತ್ತಿನ ಕೋಟ್ಯಂತರ ಜೀವರಾಶಿಗಳನ್ನು ತನ್ನ ಮಡಿಲಲ್ಲಿಕೊಂಡು ಸಲಹುತ್ತಿರುವ ಏಕೈಕ ಜೀವಂತ ಗ್ರಹ ಭೂಮಿ. ಈ ಭೂಮಿಯನ್ನು ಎಲ್ಲ ಬಗೆಯ ಮಾಲಿನ್ಯಗಳಿಂದ ಮುಕ್ತವಾಗಿಸಿ, ಮುಂದಿನ ಪೀಳಿಗೆಗಳಿಗೆ ತಲುಪಿಸಬೇಕಿರುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ.  ವಿಶ್ವ ಭೂ ದಿನವಾದ ಇಂದು ಭೂ ಸಂರಕ್ಷಣೆಯ ನಮ್ಮ ಕರ್ತವ್ಯವನ್ನು ಅರಿತು ಬಾಳೋಣ ಎಂದು ಸಾಮಾಜಿಕ ಜಾಲತಾಣದಲ್ಲಿ ಕರೆ ನೀಡಿದ್ದಾರೆ. ವಿಶ್ವ ಭೂಮಿ ದಿನದಂದು ನಮ್ಮ ಗ್ರಹವನ್ನು ರಕ್ಷಿಸೋಣ ಮತ್ತು ಅದರ ಪರಂಪರೆಯನ್ನು ಸಂರಕ್ಷಿಸೋಣ ಎಂದು ಕೇಂದ್ರ ಉಕ್ಕು ಮತ್ತು ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><><><>

ಇ-ಸ್ವತ್ತು ವಿತರಣೆಯಲ್ಲಿ ಪಾರದರ್ಶಕತೆ ತರುವ ಜೊತೆಗೆ ತೆರಿಗೆ ಸೋರಿಕೆಗೆ ಕಡಿವಾಣ ಹಾಕುವ ಮೂಲಕ ಗ್ರಾಮ ಪಂಚಾಯಿತಿಗಳ ವರಮಾನ ಹೆಚ್ಚಿಸಲು ಮಂಡ್ಯ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಕೆ.ಆರ್.ನಂದಿನಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಂಡ್ಯದಲ್ಲಿ ಇ-ಸ್ವತ್ತು ತಂತ್ರಾಂಶದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಆಸ್ತಿಗಳಿಗೆ ಇ-ಸ್ವತ್ತು ದಾಖಲೆ ವಿತರಣೆಯಲ್ಲಿನ ಸಮಸ್ಯೆಗಳ ಕುರಿತು ಅಧ್ಯಯನ ನಡೆಸುವಂತೆ ತಿಳಿಸಿದ್ದಾರೆ. ಇ-ಸ್ವತ್ತನ್ನು ಅಧಿಕೃತವಾಗಿ ಗ್ರಾಮ ಪಂಚಾಯತಿಯಲ್ಲಿಯೇ ಮಾಡಬೇಕು ಎಂದು ಹೇಳಿದ ಅವರು, ಖಾಸಗಿ ಸೈಬರ್ ಸೆಂಟರ್‌ಗಳಲ್ಲಿ ಇ-ಸ್ವತ್ತು ಮಾಡಿದ್ದಲ್ಲಿ ಕ್ರಮ ಜರುಗಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ದಾವಣಗೆರೆ ಜಿಲ್ಲೆಯಾದ್ಯಂತ ಸುರಿದ ಬಿರುಗಾಳಿ ಸಹಿತ ಮಳೆಗೆ ನೂರಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದಿದ್ದ ತೋಟಗಾರಿಕಾ ಬೆಳೆಗಳಿಗೆ ಹಾನಿ ಸಂಭವಿಸಿದೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ. ಮಾಯಕೊಂಡ ಹೋಬಳಿ ವ್ಯಾಪ್ತಿಯ ಅಣಜಿ, ಕಿತ್ತೂರು, ಹೆಮ್ಮನಬೇತೂರು, ಚಿಕ್ಕವ್ವನಾಗತಿಹಳ್ಳಿ, ಕುರುಡಿ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಭಾರೀ ಮಳೆಯಿಂದಾಗಿ ಪಪ್ಪಾಯ, ಬಾಳೆ, ಅಡಿಕೆ ಹಾಗೂ ತರಕಾರಿ ಸೇರಿದಂತೆ ಅನೇಕ ಬೆಳೆಗಳು ನೆಲಕಚ್ಚಿವೆ. ಇದರಿಂದ ರೈತರಿಗೆ ಲಕ್ಷಾಂತರ ರೂಪಾಯಿ ನ? ಸಂಭವಿಸಿದೆ ಎನ್ನಲಾಗಿದೆ. ಸ್ಥಳಿಯ ಶಾಸಕ ಕೆ.ಎಸ್.ಬಸವಂತಪ್ಪ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ರೇ? ಫರ್ವೀನ್, ಕಂದಾಯ ಇಲಾಖೆ ಅಧಿಕಾರಿಗಳ ನಿಯೋಗದೊಂದಿಗೆ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><><>

ದ್ವಿತೀಯ ಪಿ.ಯು.ಸಿ ಪರೀಕ್ಷೆ-೨ ರ ವಿದ್ಯಾರ್ಥಿಗಳು ಪರೀಕ್ಷಾ ಅವಧಿಯಲ್ಲಿ ಪ್ರವೇಶ ಪತ್ರದೊಂದಿಗೆ ಬಿಎಂಟಿಸಿ ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸಬಹುದು ಎಂದು ಪ್ರಕಟಣೆ ತಿಳಿಸಿದೆ. ದ್ವಿತೀಯ ಪಿ.ಯು.ಸಿ ಪರೀಕ್ಷೆ-೨ ವಿವಿಧ ಕಾಲೇಜುಗಳಲ್ಲಿ ಇರುವುದರಿಂದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಈ ಸೌಲಭ್ಯ ಕಲ್ಪಿಸಿದೆ. ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಹೆಚ್ಚುವರಿ ಬಸ್‌ಗಳನ್ನು ಬಿಡಲಾಗುವುದು ಎಂದು ಸಂಸ್ಥೆ ತಿಳಿಸಿದೆ.

<><><><>

ದಾವಣಗೆರೆ ಜಿಲ್ಲೆಯಾದ್ಯಂತ ಇದೇ ಏಪ್ರಿಲ್ ೨೬ ರಿಂದ ಜೂನ್ ೯ ರವರೆಗೆ ಜಾನುವಾರುಗಳಿಗೆ ಉಚಿತ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೨ ಲಕ್ಷದ ೩೭ ಸಾವಿರದ ೮೦೧ ಹಸು, ಕರು, ೯೧ ಸಾವಿರದ ೮೯೬ ಎಮ್ಮೆಗಳು ಸೇರಿ ಒಟ್ಟು ೩ ಲಕ್ಷದ ೨೯ ಸಾವಿರ ೯೯೭ ಜಾನುವಾರುಗಳಿದ್ದು, ೩ ಲಕ್ಷದ ೧೩ ಸಾವಿರದ ೧೦೦ ಲಸಿಕೆಗಳು ಲಭ್ಯವಿದೆ. ೩ ಸಾವಿರ ಬ್ಲಾಕ್‌ಗಳನ್ನು ಗುರುತಿಸಿದ್ದು, ೩೨೧ ಲಸಿಕಾದಾರರು ಪ್ರತಿ ಗ್ರಾಮ ಹಾಗೂ ಮನೆಗೆ ತೆರಳಿ ಜಾನುವಾರುಗಳಿಗೆ ಲಸಿಕೆ ನೀಡಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><><>

ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಸದಾಯೆ ಮಿಲ್ಲತ್ ಕಮಿಟಿ ಪದಾಧಿಕಾರಿಗಳ ನೇತೃತ್ವದಲ್ಲಿ ಯಾದಗಿರಿ ನಗರದ ಜಿಲ್ಲಾಡಳಿತ ಭವನದ ಮುಂದೆ ಪ್ರತಿಭಟನೆ ನಡೆಯಿತು. ಪ್ರತಿಭಟನಕಾರರು ಯಾದಗಿರಿ ಜಿಲ್ಲಾಧಿಕಾರಿ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ಸಮಿತಿ ಅಧ್ಯಕ್ಷ ಅಬ್ದುಲ್ ಗಫ್ಫಾರ್ ವರ್ಚಸ್, ಈ ಕಾಯ್ದೆಯಲ್ಲಿ ೧೯೫೫ರ ಕಾಯ್ದೆಯ ಅನೇಕ ಅಂಶಗಳನ್ನು ಕೈಬಿಡಲಾಗಿದೆ. ಈ ತಿದ್ದುಪಡಿ ಕಾಯ್ದೆಯು ಮುಸ್ಲಿಂ

ಸಮುದಾಯದ ಸಾಮಾಜಿಕ, ವೈಯಕ್ತಿಕ ಕಾನೂನಿಗೆ ವಿರುದ್ಧವಾಗಿದ್ದು, ಕಾಯ್ದೆಯ ಸಮಿತಿಯಲ್ಲಿ ಮುಸ್ಲಿಂಯೇತರ ಸದಸ್ಯರನ್ನು ಸೇರಿಸಿರುವುದು ಕಾನೂನು ಬಾಹಿರ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>